ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/ 06 /ಪದವಿ ಶುಲ್ಕ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-560 001.
ದಿನಾಂಕ:23.06.2022

# ಸುತ್ತೋಲೆ

ವಿಷಯ: 2022-23 ನೇ ಸಾಲಿಗೆ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಪದವಿ ಕೋರ್ಸು ಗಳಿಗೆ ಶುಲ್ಕ ನಿಗಧಿಗೊಳಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 131 ಡಿಸಿಇ 2022 (ಇ-ಕಡತ)
ದಿನಾಂಕ: 23.06.2022.

************

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ, 2022-23ನೇ ಶೈಕ್ಷಣಿಕ ಸಾಲಿಗೆ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಪದವಿ ಕೋರ್ಸುಗಳಿಗೆ ಶುಲ್ಕವನ್ನು ಪರಿಷ್ಕರಿಸುವ ಸಂಬಂಧ ಪ್ರಸ್ತುತ ಚಾಲ್ತಿಯಲ್ಲಿರುವ ಶುಲ್ಕವನ್ನೇ ಮುಂದುವರೆಸುವಂತೆ ಉಲ್ಲೇಖಿತ ಪತ್ರದಲ್ಲಿ ಸೂಚಿಸಲಾಗಿದ್ದು, ಅದರಂತೆ 2021-22ನೇ ಸಾಲಿನಲ್ಲಿ ಈ ಕೆಳಕಂಡಂತೆ ನಿಗಧಿಗೊಳಿಸಿದ ಶುಲ್ಕವನ್ನೇ 2022-23ನೇ ಸಾಲಿಗೂ ಮುಂದುವರೆಸಿ ವಸೂಲಿ ಮಾಡಲು ಪ್ರಾಂಶುಪಾಲರಿಗೆ ಅನುಮತಿ ನೀಡಲಾಗಿದೆ.

| ಕ್ರ.ಸಂ. | ಶುಲ್ಕದ ವಿವರ | ಶುಲ್ಕ (ರೂ.) |
|---|---|---|
| 01. | ಅರ್ಜಿ ಶುಲ್ಕ | ಉಚಿತ |
| 02. | ಪ್ರವೇಶ ಶುಲ್ಕ | 80.00 |
| 03. | ಬೋಧನಾ ಶುಲ್ಕ | 940.00 |
| 04. | ಪ್ರಯೋಗಾಲಯ ಶುಲ್ಕ<br>(ದಿನಾಂಕ:26.06.2007 ರ ಸಂಖ್ಯೆ: ಇಡಿ 102 ಯೋಯೋಕ 2007ರ ಆದೇಶದಲ್ಲಿ 2007-08ನೇ ಶೈಕ್ಷಣಿಕ ಸಾಲಿನಿಂದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿ ನಿಯರಿಗೆ ಬೋಧನಾ ಮತ್ತು ಪ್ರಯೋಗಾಲಯ ಶುಲ್ಕವನ್ನು ಮನ್ನ ಮಾಡಲಾಗಿದೆ) | 260.00 |
| 05. | ವೈದ್ಯಕೀಯ ತಪಾಸಣಾ ಶುಲ್ಕ | 30.00 |
| 06. | ವರ್ಗಾವಣೆ ಪತ್ರ ಶುಲ್ಕ | 40.00 |
| 07. | ವಿದ್ಯಾಭ್ಯಾಸ ಪ್ರಮಾಣ ಪತ್ರ ಶುಲ್ಕ | 20.00 |
| 08. | ವಾಚನಾಲಯ ಶುಲ್ಕ | 70.00 |
| 09. | ಕ್ರೀಡಾ ಶುಲ್ಕ | 100.00 |
| 10. | ಗ್ರಂಥಾಲಯ ಶುಲ್ಕ (ಬೈಂಡಿಂಗ್ ಸೇರಿ) | 100.00 |
| 11. | ಕಾಲೇಜು ಅಭಿವೃದ್ಧಿ ಶುಲ್ಕ (ಸರ್ಕಾರಿ ಕಾಲೇಜುಗಳಿಗೆ ಮಾತ್ರ)<br>(ಸರ್ಕಾರಿ ಆದೇಶ ಸಂಖ್ಯೆ: ಇಡಿ 89 ಯುಇಸಿ 2001 ದಿನಾಂಕ:13.01.2003. | 200.00 |
| 12. | ಅ) ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ.<br>ಆ) ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ. | 25.00<br>25.00 |
| 13. | ದಿ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸನ ರೋವರ್ ಮತ್ತು ರೇಂಜರ್ ಘಟಕ ಪ್ರಾರಂಭಿಸಲು ಹಾಗೂ ಘಟಕಗಳ ಚಟುವಟಿಕೆ ಶುಲ್ಕ<br>(ಸರ್ಕಾರಿ ಆದೇಶ ಸಂಖ್ಯೆ: ಇಡಿ 46 ವಿವಿಧ 2010 ದಿನಾಂಕ:23.11.2011) | 50.00 |

...2

| | | |
|---|---|---|
| 14. | ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಶುಲ್ಕ<br>(ಸರ್ಕಾರಿ ಆದೇಶ ಸಂಖ್ಯೆ: ಇಡಿ 64 ವಿವಿಧ 2011 ದಿನಾಂಕ:22.12.2011) | 50.00 |
| 15. | ಎನ್.ಎಸ್.ಎಸ್. ಶುಲ್ಕ<br>ಅ) ಘಟಕ ಇಲ್ಲದ ಕಾಲೇಜುಗಳಲ್ಲಿ<br>ಆ) ಒಂದು ಘಟಕ ಇರುವ ಕಾಲೇಜುಗಳಲ್ಲಿ<br>(ಸರ್ಕಾರಿ ಆದೇಶ ಸಂಖ್ಯೆ:ಇಡಿ 11 ವಿವಿಧ 2015 ದಿನಾಂಕ: 04.05.2015) | <br>50.00<br>40.00 |
| 16. | ನೋಂದಣಿ ಶುಲ್ಕ | ಆಯಾ ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದಂತೆ |
| 17. | ವಿಶ್ವವಿದ್ಯಾಲಯ ಪರೀಕ್ಷಾ ಶುಲ್ಕ | |
| 18. | ಕ್ರೀಡಾ ಅಭಿವೃದ್ಧಿ ಶುಲ್ಕ | |
| 19. | ವಿದ್ಯಾರ್ಥಿ ಸಂಘ, ಸಾಂಸ್ಕೃತಿಕ ಚಟುವಟಿಕೆಗಳು, ಕಾಲೇಜು ಮ್ಯಾಗಜಿನ್, ಕಾಲೇಜಿನ / ಗ್ರಂಥಾಲಯದ ಗುರುತಿನ ಚೀಟಿ, ಇತರೆ ಶುಲ್ಕ | ವಿದ್ಯಾರ್ಥಿಗಳಿಗೆ ಹೊರೆಯಾಗದಂತೆ ಕಾಲೇಜಿನ ಸಮಿತಿಯು ನಿರ್ಣಯಿಸತಕ್ಕದ್ದು. |

**ಷರತ್ತುಗಳು:**

1. ಸರ್ಕಾರಿ ಹಾಗೂ ಅನುದಾನಿತ ಪದವಿ ಕಾಲೇಜುಗಳಲ್ಲಿ ಬಿ.ಎ., ಬಿ.ಕಾಂ., ಬಿ.ಬಿ.ಎ. / ಬಿ.ಬಿ.ಎಂ., ಬಿ.ಸಿ.ಎ. ಕಾನೂನು ಮತ್ತು ಚಿತ್ರಕಲಾ ಕೋರ್ಸ್‌ಗಳಿಗೆ ಮೇಲಿನ ಶುಲ್ಕಗಳನ್ನು ವಸೂಲಿ ಮಾಡಲು ಸೂಚಿಸಲಾಗಿದೆ.
2. ಆಯಾಯ ಕಾಲೇಜುಗಳ ಅರೆ ಸರ್ಕಾರಿ ಬ್ಯಾಂಕ್ ಖಾತೆಗಳನ್ನು ಪ್ರಾಂಶುಪಾಲರು ಹಾಗೂ ಸೇವೆಯಲ್ಲಿ ಹಿರಿಯರಾದ ಮತ್ತೊಬ್ಬ ಉಪನ್ಯಾಸಕರ ಹೆಸರಿನಲ್ಲಿ ಜಂಟಿ ಖಾತೆಗಳನ್ನಾಗಿ ಪರಿವರ್ತಿಸಿಕೊಳ್ಳಲು ಸೂಚಿಸಲಾಗಿದೆ.
3. ಕಾಲೇಜು ಅಭಿವೃದ್ಧಿ ಶುಲ್ಕ, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ದಿ ಸ್ಕೌಟ್ಸ್ ಅಂಡ್ ಗೈಡ್ಸ್ ರೋವರ್ ಮತ್ತು ರೇಂಜರ್ ಘಟಕ, ಭಾರತ ರೆಡ್ ಕ್ರಾಸ್ ಸಂಸ್ಥೆ ಶುಲ್ಕ, ಎನ್.ಎಸ್.ಎಸ್. ಶುಲ್ಕ ಮುಂತಾದವುಗಳ ಶುಲ್ಕ ಸಂಗ್ರಹ ಹಾಗೂ ಅವುಗಳಿಗೆ ಸಂಬಂಧಿಸಿದಂತೆ ಸರ್ಕಾರಿ ಆದೇಶಗಳಲ್ಲಿ ತಿಳಿಸಿರುವ ಮಾರ್ಗಸೂಚಿ ಹಾಗೂ ನಿಬಂಧನೆಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.
4. ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿಯ ಮೊತ್ತವನ್ನು ಕಾಲೇಜು ಶಿಕ್ಷಣ ಇಲಾಖೆಯ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸದುಪಯೋಗಪಡಿಸಿಕೊಳ್ಳಲು ಸೂಚಿಸಲಾಗಿದೆ.
5. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ವೈದ್ಯಕೀಯ ತಪಾಸಣೆಯನ್ನು ಕಡ್ಡಾಯವಾಗಿ ನಡೆಸತಕ್ಕದ್ದು ಹಾಗೂ ತಪಾಸಣೆಯನ್ನು ನಡೆಸಿರುವ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಕಳುಹಿಸತಕ್ಕದ್ದೆಂದು ಸೂಚಿಸಲಾಗಿದೆ.
6. 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ವಿದ್ಯಾರ್ಥಿನಿಯರಿಗೆ ಪೂರ್ಣ ಶುಲ್ಕ ವಿನಾಯಿತಿಯನ್ನು ಮುಂದುವರೆಸಲು ಹಾಗೂ 2022-23ನೇ ಸಾಲಿನ ಪ್ರವೇಶಾತಿ ಶುಲ್ಕದಲ್ಲಿ ಸರ್ಕಾರಿ ಶುಲ್ಕಗಳನ್ನು ಸಂಪೂರ್ಣ ವಿನಾಯಿತಿ ನೀಡುವುದು. ಹಾಗೂ ಇತರೆ ಶುಲ್ಕಗಳನ್ನು ವಿದ್ಯಾರ್ಥಿನಿಯರಿಂದ ವಸೂಲಿ ಮಾಡಿ ಪ್ರವೇಶಾತಿ ಹಾಗೂ ಪರೀಕ್ಷಾ ಶುಲ್ಕ ವಸೂಲಾತಿ ಪ್ರಕ್ರಿಯೆ ಮುಗಿದ ನಂತರ ಮರುಪಾವತಿಸಲು ಸೂಚಿಸಲಾಗಿದೆ.
7. ವಿವಿಧ ಇಲಾಖೆಗಳಿಂದ ವಿದ್ಯಾರ್ಥಿಗಳಿಗೆ ಮಂಜೂರು ಮಾಡಲಾಗುವ ವಿದ್ಯಾರ್ಥಿವೇತನ ಮೊತ್ತದಲ್ಲಿ ವಿನಾಯಿತಿ ನೀಡಿರುವ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸಿಕೊಂಡು ಉಳಿಕೆ ಮೊತ್ತವನ್ನು ವಿದ್ಯಾರ್ಥಿಗಳಿಗೆ ಹಿಂಪಾವತಿಸಲು ಸೂಚಿಸಲಾಗಿದೆ.
8. ಚಿತ್ರಕಲಾ ಕಾಲೇಜುಗಳಿಗೆ ಸಂಬಂಧಿಸಿದಂತೆ ಪರೀಕ್ಷಾ ಶುಲ್ಕಗಳನ್ನು ರೂ.1000 ಕ್ಕೆ ಹಾಗೂ ಪ್ರವೇಶಾತಿ ಶುಲ್ಕಗಳನ್ನು ಈಗಿರುವ ಶುಲ್ಕ ರೂ.200ರ ಬದಲಾಗಿ ರೂ.500 ಗಳಿಗೆ ಹೆಚ್ಚಿಸುವಂತೆ

ಸೂಚಿಸಲಾಗಿದೆ ಹಾಗೂ ಸದರಿ ಶುಲ್ಕಗಳನ್ನು ಆಯಾಯ ಕಾಲೇಜುಗಳು ನೇರವಾಗಿ ಕನ್ನಡ ವಿಶ್ವವಿದ್ಯಾಲಯ, ಹಂಪಿ ಇಲ್ಲಿಗೆ ಸಂದಾಯ ಮಾಡಲು ಸೂಚಿಸಲಾಗಿದೆ.

..3



9. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 33 ಯುಇಸಿ 2012 ದಿನಾಂಕ:07.08.2012 ರನ್ವಯ ಕಾಲೇಜು ಅಭಿವೃದ್ಧಿ ಸಮಿತಿಯ ಹೆಸರಿನಲ್ಲಿ ಪ್ರತಿ ವಿದ್ಯಾರ್ಥಿಯಿಂದ ವರ್ಷಕ್ಕೊಮ್ಮೆ ಕಾಲೇಜಿನ ಪ್ರವೇಶಾತಿ ಸಮಯದಲ್ಲಿ ಪ್ರವೇಶ ಶುಲ್ಕದ ಜೊತೆಗೆ ರೂ.150/- ರಿಂದ ರೂ.600/- ರವರೆಗೆ ಮಾತ್ರ ಸಂದರ್ಭಾನುಸಾರ ಸಂಗ್ರಹಿಸಲು ಕ್ರಮವಹಿಸತಕ್ಕದ್ದು.
10. ಖಾಸಗಿ ಅನುದಾನಿತ ಕಾಲೇಜುಗಳಿಗೆ ಸಂಬಂಧಿಸಿದಂತೆ, ನಿಗಧಿತ ಬೋಧನಾ ಶುಲ್ಕ ಮತ್ತು ಪ್ರಯೋಗಾಲಯ ಶುಲ್ಕಗಳನ್ನು ಸಂಗ್ರಹಿಸಿ ಜಮಾ ಮಾಡುವ ಬಗ್ಗೆ ಸರ್ಕಾರದ ಅಧಿಸೂಚನೆ ಸಂಖ್ಯೆ; ಇಡಿ 139 ಯುಪಿಸಿ 2014, ದಿನಾಂಕ:18.10.2014 ರಲ್ಲಿ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) 2003ರ ನಿಯಮ 18(4)ಕ್ಕೆ ತಿದ್ದುಪಡಿ ಆದೇಶವನ್ನು ಹೊರಡಿಸಲಾಗಿದ್ದು, ಅದರಂತೆ ಕ್ರಮ ವಹಿಸಲು ಸೂಚಿಸಿದೆ.
11. ಖಾಸಗಿ ಅನುದಾನಿತ ಕಾಲೇಜುಗಳಿಗೆ ಸಂಬಂಧಿಸಿದಂತೆ, ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/184/ಮ.ಲೇ.ಆ/2019-20 ದಿನಾಂಕ:20.03.2020 ರಲ್ಲಿ ತಿಳಿಸಿರುವಂತೆ ಸರ್ಕಾರದ ಆದೇಶ ಸಂಖ್ಯೆ: ಇಡಿ 109 ಮಾಹಿತಿ 2014 ರನ್ವಯ ಅರ್ಹ ವಿದ್ಯಾರ್ಥಿನಿಯರಿಗೆ ಬೋಧನಾ ಮತ್ತು ಪ್ರಯೋಗಾಲಯ ಶುಲ್ಕಗಳನ್ನು ವಸೂಲಿ ಮಾಡದೇ ಸಂಪೂರ್ಣವಾಗಿ ವಿನಾಯಿತಿ ನೀಡಲು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ ಹಾಗೂ ವಿನಾಯಿತಿ ನೀಡಿದ ಶುಲ್ಕದ ಮೊತ್ತವನ್ನು ಸರ್ಕಾರದಿಂದ ಮರುಭರಿಕೆಗಾಗಿ ಪ್ರಸ್ತಾವನೆಯನ್ನು ಸಂಬಂಧಿಸಿದ ಜಂಟಿ ನಿರ್ದೇಶಕರ ಮುಖಾಂತರ ಈ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.
12. ಪ್ರವೇಶ ಶುಲ್ಕ ಮತ್ತು ನೋಂದಣಿ ಶುಲ್ಕಗಳನ್ನು 2022-23 ಶೈಕ್ಷಣಿಕ ಸಾಲಿನಲ್ಲಿ ಪ್ರಥಮ ಪದವಿ ಕೋರ್ಸ್‌ಗಳಿಗೆ ಸೇರುವ ವಿದ್ಯಾರ್ಥಿಗಳಿಂದ ಮಾತ್ರ ವಸೂಲಿ ಮಾಡತಕ್ಕದ್ದು.

**(ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟಿದೆ)**

**ನಿರ್ದೇಶಕರು**
**ಕಾಲೇಜು ಶಿಕ್ಷಣ ಇಲಾಖೆ**

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿಯನ್ನು:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ರಾಜ್ಯ ಶಿಕ್ಷಣ ಕಲ್ಯಾಣ ನಿಧಿ, ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ರಾಷ್ಟ್ರೀಯ ಶಿಕ್ಷಕರ ಕಲ್ಯಾನ ಪ್ರತಿಷ್ಠಾನ, ಶಿಕ್ಷಕರ ಸದನ, ಕೆಂಪೇಗೌಡ ರಸ್ತೆ, ಬೆಂಗಳೂರು-560 002.
5. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಆಯುಕ್ತರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು.
7. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ.
8. Project Director, State Scholarship Portal, Centre for e-Governance DPAR (e-Governance), Gate 2, 1st Floor, Room #110, MS Building, Bengaluru-560001